ಪತ್ರಿಕೆಯ ಹೆಸರು : NAME OF THE NEWS PAPER
ದಿನಾಂಕ : DATE 27/10/22

ಮಳೆ: 344 ಸಂತ್ರಸ್ತ ಕುಟುಂಬಗಳಿಗೆ ಪರಿಹಾರ

ದತ್ತಾತ್ರೇಯನಗರ, ಕುಮಾರಸ್ವಾಮಿ ಲೇಔಟ್‌ನಲ್ಲಿ ₹25,000ದಂತೆ 344 ಕುಟುಂಬಗಳಿಗೆ ₹86 ಲಕ್ಷ ಪರಿಹಾರ ವಿತರಣೆ

ಸ್ವಲ್ಪ ಪ್ರಮಾಣದಲ್ಲಿ ಹಾನಿಗೊಳಗಾದ ಕುಟುಂಬಗಳಿಗೂ ತಲಾ ₹10,000 ಪರಿಹಾರ ನೀಡಲು ನಿರ್ಧಾರ: ಸಚಿವ ಅಶೋಕ್

• ಕನ್ನಡಪ್ರಭ ವಾರ್ತೆ ಬೆಂಗಳೂರು

ಕಳೆದ ಶುಕ್ರವಾರ ಸುರಿದ ಧಾರಾಕಾರ ಮಳೆಯಿಂದ ನಗರದಲ್ಲಿ ಹಾನಿಗೆ ಒಳಗಾದ 344 ಕುಟುಂಬಕ್ಕೆ ರಾಜ್ಯ ಸರ್ಕಾರ ತಲಾ 25 ಸಾವಿರ ರು. ಪರಿಹಾರ ನೀಡಿದೆ.

ರಾಷ್ಟ್ರೀಯ ವಿಪತ್ತು ನಿರ್ವಹಣೆ (ಎನ್‌ಡಿಆರ್‌ಎಫ್) ಅಡಿ ತಲಾ ಮೂರು ಸಾವಿರ ರು. ಮಾತ್ರ ಪರಿಹಾರ ನೀಡುವುದಕ್ಕೆ ಅವಕಾಶ ಇದೆ. ಆದರೆ ಹೆಚ್ಚು ಹಾನಿಯಾಗಿರುವ ಹಿನ್ನೆಲೆಯಲ್ಲಿ ಹಾಗೂ ಮುಖ್ಯಮಂತ್ರಿ ಯಡಿಯೂರಪ್ಪ ಅವರ ನಿರ್ದೇಶನದ ಮೇಲೆ ದತ್ತಾತ್ರೇಯ ಬಡಾವಣೆಯಲ್ಲಿ 304 ಹಾಗೂ ಕುಮಾರಸ್ವಾಮಿ ಬಡಾವಣೆಯ 40 ಕುಟುಂಬಗಳಿಗೆ ತಲಾ 25 ಸಾವಿರದಂತೆ ಒಟ್ಟು 86 ಲಕ್ಷ ರು. ಪರಿಹಾರ ವಿತರಿಸಲಾಗಿದೆ.

ಪರಿಹಾರದ ಚೆಕ್‌ಗಳನ್ನು ಸಂತ್ರಸ್ತರಿಗೆ ನೀಡಿ ಮಾತನಾಡಿದ ಕಂದಾಯ ಸಚಿವ ಆರ್. ಅಶೋಕ್, ಬೆಂಗಳೂರು ದಕ್ಷಿಣ, ಬೊಮ್ಮನಹಳ್ಳಿ ಸೇರಿದಂತೆ ವಿವಿಧೆಡೆ ಮಳೆಯಿಂದ ಮನೆ ಹಾಳಾಗಿರುವ ಕುಟುಂಬಕ್ಕೆ ಪರಿಹಾರ ನೀಡಲಾಗುತ್ತಿದೆ. ಅಲ್ಲದೆ, ಮಳೆಯಿಂದ ಸ್ವಲ್ಪ ಪ್ರಮಾಣದಲ್ಲಿ ಹಾನಿಗೆ ಒಳಗಾದ ಕುಟುಂಬಗಳಿಗೆ ತಲಾ 10 ಸಾವಿರ ರು. ಪರಿಹಾರ ನೀಡಲು ನಿರ್ಧರಿಸಲಾಗಿದ್ದು, ಈ ಸಂಬಂಧ ಸಮೀಕ್ಷೆ ನಡೆಸಿ ಪಟ್ಟಿ ನೀಡುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ.

ನೆಲ ಮಹಡಿಯಲ್ಲಿ ನೆಲೆಸಿದ್ದು, ಮಳೆಯಿಂದ ಹಾನಿಯಾದ ಮನೆಗಳಲ್ಲಿ ನೆಲೆಸಿರುವ ಕುಟುಂಬದವರಿಗೆ ಮಾತ್ರ ಪರಿಹಾರ ನೀಡಲಾಗುತ್ತಿದೆ. ಮೊದಲನೇ ಮತ್ತು ಎರಡನೇ ಮಹಡಿಯಲ್ಲಿ ವಾಸವಿರುವವರಿಗೆ ನಿಯಮಾನುಸಾರ ಪರಿಹಾರ ನೀಡಲು ಬರುವುದಿಲ್ಲ. ಮಳೆ ಹಾನಿ ಉಂಟಾದ ರಸ್ತೆಗಳಲ್ಲಿ ಸಮೀಕ್ಷೆ ನಡೆಸಲಾಗುತ್ತಿದೆ ಎಂದರು.

ರಾಜಕಾಲುವೆ ಒತ್ತುವರಿ ತೆರವು: ರಾಜಕಾಲುವೆ ಒತ್ತುವರಿದಾರರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು. ಒತ್ತುವರಿ ಪ್ರದೇಶವನ್ನು ಶೀಘ್ರ ಗುರುತಿಸಿ, ತೆರವು ಕಾರ್ಯಚರಣೆ ಪ್ರಾರಂಭಿಸಲಾಗುವುದು ಎಂದು ತಿಳಿಸಿದರು.

ಕಳೆದ ಶುಕ್ರವಾರ ಸುರಿದ ಧಾರಾಕಾರ ಮಳೆಯಿಂದ ತೊಂದರೆಗೀಡಾದ ಕುಟುಂಬಗಳಿಗೆ ಕಂದಾಯ ಸಚಿವ ಆರ್.ಅಶೋಕ್ ಪರಿಹಾರದ ಚೆಕ್ ವಿತರಿಸಿದರು.

ಒತ್ತುವರಿದಾರರಿಗೂ ಪರಿಹಾರ!

ಮಳೆಹಾಳಿಗೆ ಒಳಗಾದ 344 ಕುಟುಂಬಗಳಿಗೆ ಸರ್ಕಾರ ತಲಾ 25 ಸಾವಿರ ರು. ಪರಿಹಾರ ನೀಡಿದೆ. ಆದರೆ, ಈ ಪೈಕಿ ಸುಮಾರು 100 ಹೆಚ್ಚು ಮನೆಗಳವರು ರಾಜಕಾಲುವೆ ಒತ್ತುವರಿ ಮಾಡಿಕೊಂಡಿದ್ದಾರೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಆದರೆ, ತಾತ್ಕಾಲಿಕವಾಗಿ ಸರ್ಕಾರ ಅವರಿಗೆ ಪರಿಹಾರ ನೀಡಿದೆ. ಒತ್ತುವರಿ ತೆರವು ಕಾರ್ಯಾಚರಣೆ ವೇಳೆ ನಿದಾಕ್ಷಿಣ್ಯವಾಗಿ ಒತ್ತುವರಿ ತೆರವು ಗೊಳಿಸಲಾಗುವುದು ಎಂದು ಸಚಿವರು ತಿಳಿಸಿದ್ದಾರೆ.

ಮುಂದುವರೆದ ಮನೆಗಳ ಸ್ವಚ್ಛತಾ ಕಾರ್ಯ

ಬೆಂಗಳೂರು: ರಾಜಕಾಲುವೆ ನೀರು ನುಗ್ಗಿ ಹಾನಿ ಉಂಟಾದ ಸಂಕಷ್ಟದಿಂದಾಗಿ ದಸರಾ ಸಂಭ್ರಮದಿಂದ ವಂಚಿತರಾಗಿರುವ ಹೊಸಕೆರೆಹಳ್ಳಿಯ ದತ್ತಾತ್ರೆಯ ಬಡಾವಣೆ ಜನರು ಸೋಮವಾರವೂ ಮನೆ ಸ್ವಚ್ಛತಾ ಕಾರ್ಯದಲ್ಲಿ ತೊಡಗಿದ್ದರು.

ಶುಕ್ರವಾರ ಸುರಿದ ಭಾರೀ ಮಳೆಯಿಂದ ದತ್ತಾತ್ರೆಯ ಬಡಾವಣೆಯ ಸುಮಾರು 300ಕ್ಕೂ ಅಧಿಕ ಮನೆಗಳಿಗೆ ನೀರು ನುಗ್ಗಿತ್ತು. ಈ ವೇಳೆ ಮನೆಯಲ್ಲಿ ಪೀಠೋಪಕರಣಗಳು, ಪುಸ್ತಕ, ಬಟ್ಟೆ, ಟಿವಿ, ಫ್ರಿಡ್ಜ್, ಹಾಸಿಗೆ, ದವಸ ಧಾನ್ಯಗಳು ಹಾಳಾಗಿದ್ದವು. ಮಳೆಪ್ರಮಾಣಕಡಿಮೆಯಾದ ಹಿನ್ನೆಲೆಯಲ್ಲಿ ಬಡಾವಣೆಯ ಜನ ಸೋಮವಾರವೂ ಸ್ವಚ್ಛತಾ ಕಾರ್ಯ ಮುಂದುವರೆಸಿದರು. ಹೀಗಾಗಿ, ಇಡೀ ಬಡಾವಣೆಯಲ್ಲಿ ನಾಡ ಹಬ್ಬದ ಆಚರಣೆ, ಆಯುದ ಪೂಜೆ, ವಾಹನಗಳ ಪೂಜೆ ಅಲಂಕಾರ ಕಾಣಲಿಲ್ಲ. ಎಲ್ಲರೂ ಮನೆ ಸ್ವಚ್ಛತಾ ಕಾರ್ಯದಲ್ಲಿ ತೊಡಗಿಸಿಕೊಂಡಿದ್ದರು. ಪ್ರಾವಿಜನ್ ಸ್ಟೋರ್, ಬೇಕರಿಯಲ್ಲಿನ ಎಲ್ಲ ವಸ್ತುಗಳು ನೀರು ಪಾಲಾಗಿದ್ದರಿಂದ ಅವುಗಳನ್ನು ಬಿಸಿಲಿನಲ್ಲಿ ಹಾಕಿ ಒಣಗಿಸುವ ಕಾರ್ಯ ನಡೆಯುತ್ತಿತ್ತು. ಕೆಟ್ಟ ಎಲೆಕ್ಟ್ರಾನಿಕ್ ಉಪಕರಣಗಳನ್ನು ರಿಪೇರಿ ಅಂಗಡಿಗಳಿಗೆ ತೆಗೆದುಕೊಂಡು ಹೋಗುತ್ತಿದ್ದ ದೃಶ್ಯಗಳು ಸಾಮಾನ್ಯವಾಗಿ ಕಂಡು ಬಂದವು.

ಬಿಬಿಎಂಪಿಯ ಪೌರಕಾರ್ಮಿಕರು ಮನೆಗಳಿಗೆ ನೀರು ನುಗ್ಗಿ ಹಾಳಾಗಿದ್ದ ಮನೆಯನ್ನು ಸ್ವಚ್ಛಮಾಡಲು ಸಂತ್ರಸ್ತರಿಗೆ ನೆರವಾದರು. ಬಿಬಿಎಂಪಿಯಿಂದ ಊಟ ಮತ್ತು ತಿಂಡಿ ವ್ಯವಸ್ಥೆ ಸಹಮಾಡಲಾಗಿತ್ತು. ಮಂಗಳವಾರವೂ ರಸ್ತೆ, ಚರಂಡಿ ಸ್ವಚ್ಛತಾ ಕಾರ್ಯ ಮುಂದುವರೆಯಲಿದೆ ಎಂದು ದಕ್ಷಿಣ ವಲಯದ ಜಂ ಟಿ ಆಯುಕ್ತ ವೀರಭದ್ರಸ್ವಾಮಿ ತಿಳಿಸಿದ್ದಾರೆ.

ಗೌರವ್ ಗುಪ್ತಾ ಪರಿಶೀಲನೆ

ದತ್ತಾತ್ರೇಯ ನಗರದ ರಾಜಕಾಲುವೆ ಸಮಸ್ಯೆ ಪರಿಹರಿಸುವ ಸಂಬಂಧ ಬಿಬಿಎಂಪಿಯ ಆಡಳಿತಾಧಿಕಾರಿ ಗೌರವ್ ಗುಪ್ತ ಸ್ಥಳ ಪರಿಶೀಲನೆ ನಡೆಸಿದರು. ರಾಜಕಾಲುವೆ ಮಾರ್ಗ ಕಿರಿದಾಗಿರುವುದು ಹಾಗೂ ರಾಜಕಾಲುವೆ ಮಾರ್ಗದ ಪೈಪ್‌ಲೈನ್ ವ್ಯವಸ್ಥೆ ಸಮರ್ಪಕವಾಗಿ ಇಲ್ಲದೆ ಇರುವುದರಿಂದ ಸಮಸ್ಯೆ ಸೃಷ್ಟಿಯಾಗುತ್ತಿದೆ. ಕೂಡಲೇ ಸರಿಪಡಿಸಲು ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ರಾಜಕಾಲುವೆ ತಡೆಗೋಡೆ ಕುಸಿದ ಭಾಗದಲ್ಲಿ ಮರಳು ತುಂಬಿದ ಚೀಲದ ಮೂಟೆಗಳನ್ನು ಹಾಕಲಾಗಿದ್ದು, ತ್ವರಿತವಾಗಿ ಕಾಂಕ್ರೀಟ್ ಗೋಡೆ ನಿರ್ಮಿಸಲು ಸೂಚಿಸಲಾಗಿದೆ. ರಾಜಕಾಲುವೆಗೆ ಹೊಂದಿಕೊಂಡಿರುವ ಹಾಗೂ ಸಮೀಪದಲ್ಲಿರುವ ಮನೆಗಳ ಅಡಿಪಾಯ ಮತ್ತು ಕಟ್ಟಡದಲ್ಲಿ ಜನ ವಾಸಿಸಲು ಯೋಗ್ಯವಾಗಿದೆಯೇ ಎಂಬುದನ್ನು ಖುದ್ದಾಗಿ ಪರಿಶೀಲನೆ ನಡೆಸುವಂತೆ ನಿರ್ದೇಶಿಸಿದ್ದಾರೆ.

ಹಂತಹಂತವಾಗಿ ಕಾಮಗಾರಿ

ಹೊಸಕೆರೆಹಳ್ಳಿ ವಾರ್ಡ್‌ನ ದತ್ರಾತ್ರೇಯ ಬಡಾವಣೆ ನೀರು ಸರಾಗವಾಗಿ ಹರಿದು ಹೋಗುವುದಕ್ಕೆ ಕೆಲವು ಅಡಚಣೆಗಳಿದ್ದು, ಕಿರಿದಾದ ರಾಜಕಾಲುವೆ ಮಾರ್ಗ ಅಗಲ ಹೆಚ್ಚಿಸುವುದರಿಂದ ನೀರು ಸರಾಗವಾಗಿ ಹರಿದು ಹೋಗಲು ಸಾಧ್ಯವಾಗಲಿದೆ. ಕೊಳಚೆ ನೀರು ಹರಿದು ಹೋಗುವ ಮಾರ್ಗವೂ ಕಿರಿದಾಗಿದೆ. ಇವೆಲ್ಲವನ್ನೂ ಹಂತ- ಹಂತವಾಗಿ ಶೀಘ್ರ ಸರಿಪಡಿಸುತ್ತೇವೆ ಎಂದು ಬಿಬಿಎಂಪಿ ರಾಜಕಾಲುವೆ ಮುಖ್ಯ ಎಂಜಿನಿಯರ್ ಬಿ. ಎನ್.ಪ್ರಹ್ಲಾದ್ ತಿಳಿಸಿದರು. ಈ ವೇಳೆ ಬಿಬಿಎಂಪಿ ವಿಶೇಷ ಆಯುಕ್ತ [illegible]ರು) ಬಸವರಾಜು, ದಕ್ಷಿಣ ವಲಯ ಜಂಟಿ ಆಯುಕ್ತ ವೀರಭದ್ರಸ್ವಾಮಿ ಹಾಗೂ ಉಪ ಆಯುಕ್ತೆ ಲಕ್ಷ್ಮೀದೇವಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.